# All India Radio: Bangalore
# National Bulletin In Kannada
# 22.01.2025  19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**22.01.2025  19.35 p.m.**

ಮುಖ್ಯಾಂಶಗಳು

1. ಬೇಟಿ ಬಚಾವೋ ಬೇಟಿ ಪಡಾವೋ ಉಪಕ್ರಮಕ್ಕೆ ೧೦ ವರ್ಷ ; ಹೆಣ್ಣು ಮಕ್ಕಳ ಕನಸುಗಳ ಸಾಕಾರಕ್ಕೆ ಹೊಸ ಶಕ್ತಿ - ಕೇಂದ್ರ ಸಚಿವೆ ಅನ್ನಪೂರ್ಣ ದೇವಿ
2. ೨೦೨೫-೨೬ರ ಸಾಲಿಗೆ ಕಚ್ಚಾ ಸೆಣಬಿಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಿದ ಕೇಂದ್ರ ಸರ್ಕಾರ
3. ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೊಗೆ ನವದೆಹಲಿಯಲ್ಲಿ ತೆರೆ
4. ಟರ್ಕಿ ರೆಸಾರ್ಟ್ ಬೆಂಕಿ ದುರಂತ ; ಸಾವನ್ನಪ್ಪಿದವರ ಸಂಖ್ಯೆ ೭೬ಕ್ಕೆ ಏರಿಕೆ
5. ಐದು ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿ ; ಟಾಸ್ ಗೆದ್ದ ಭಾರತ ಫೀಲ್ಡಿಂಗ್

<><><><>

ಹೆಣ್ಣುಮಕ್ಕಳ ಸುರಕ್ಷತೆ, ಶಿಕ್ಷಣ ಮತ್ತು ಸಬಲೀಕರಣದ ಗುರಿಯೊಂದಿಗೆ ಜಾರಿ ಮಾಡಲಾದ 'ಬೇಟಿ ಬಚಾವ್ ಬೇಟಿ ಪಢಾವ್' ಉಪಕ್ರಮದ ಹತ್ತನೇ ವಾರ್ಷಿಕೋತ್ಸವದ ಸಂಭ್ರಮಾಚರಣೆಗೆ ಇಂದು ಚಾಲನೆ ದೊರೆತಿದೆ. ನವದೆಹಲಿಯ ವಿಜ್ಞಾನ ಭವನದಲ್ಲಿಂದು ನಡೆದ ಪ್ರಧಾನ ಕಾರ್ಯಕ್ರಮವನ್ನು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಉದ್ಘಾಟಿಸಿದರು. ಸಮಾರಂಭದಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣದೇವಿ, ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ಸೇರಿದಂತೆ ಮತ್ತಿತರ ಗಣ್ಯರು ಪಾಲ್ಗೊಂಡಿದ್ದರು. ಕಾರ್ಯಕ್ರಮದಲ್ಲಿ ವಿಶೇಷವಾಗಿ ಭದ್ರತಾ ಪಡೆ, ಅರೆ ಸೇನಾಪಡೆ, ದೆಹಲಿ ಪೊಲೀಸ್ ಪಡೆಯ ಮಹಿಳಾ ಅಧಿಕಾರಿಗಳು, ವಿದ್ಯಾರ್ಥಿನಿಯರು ಮತ್ತು ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿದ್ದರು.

ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವ ಜೆ.ಪಿ. ನಡ್ಡಾ, ಮಕ್ಕಳ ಲಿಂಗಾನುಪಾತದಲ್ಲಿ ಸಮತೋಲನ ತರುವಲ್ಲಿ ಆರೋಗ್ಯ ಸಚಿವಾಲಯದ ಜವಾಬ್ದಾರಿ ಹೆಚ್ಚಿದೆ. ಇದೇ ಗುರಿಯೊಂದಿಗೆ ೧೯೯೪ ರ ಗರ್ಭದಾರಣೆಪೂರ್ವ ಮತ್ತು ಪ್ರಸವಪೂರ್ವ ರೋಗ ನಿರ್ಣಯ ತಂತ್ರಗಳ ಕಾಯ್ದೆ ಮೂಲಕ ೧ ಸಾವಿರಕ್ಕೆ ೮೯೮ರಲ್ಲಿದ್ದ ಗಂಡು ಹಾಗೂ ಹೆಣ್ಣು ಮಕ್ಕಳ ಅನುಪಾತ,

ಈಗ ೯೦೭ಕ್ಕೂ ಅಧಿಕವಾಗಿ ಪ್ರಗತಿಯನ್ನು ಸಾಧಿಸುತ್ತಲಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಈ ಲಿಂಗಾನುಪಾತ ಸಮತೋಲನ ಸಾಧಿಸುವ ಸಮಯ ದೂರವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**ಧ್ವನಿ : ಜೆ.ಪಿ. ನಡ್ಡಾ**

ಬಳಿಕ ಮಾತನಾಡಿದ ಕೇಂದ್ರ ಸಚಿವೆ ಅನ್ನಪೂರ್ಣದೇವಿ, ಬೇಟಿ ಬಚಾವ್ ಬೇಟಿ ಪಢಾವ್ ಅಭಿಯಾನ ಹೆಣ್ಣುಮಕ್ಕಳ ಕನಸುಗಳ ಸಾಕಾರಕ್ಕೆ ಹೊಸಶಕ್ತಿ ನೀಡಿದರು. ಇಂದು ಅವರಿಗೆ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯಡಿ ಗರ್ಭಿಣಿಯರಿಗೆ ಆರ್ಥಿಕ ನೆರವು ನೀಡಲಾಗುತ್ತಿದೆ ಎಂದರು.

**ಧ್ವನಿ : ಅನ್ನಪೂರ್ಣ ದೇವಿ**

ಇಂದು ಚಾಲನೆ ದೊರೆತಿರುವ ಹತ್ತನೇ ವಾರ್ಷಿಕೋತ್ಸವದ ಸಂಭ್ರಮಾಚರಣೆ ಅಂತಾರಾಷ್ಟ್ರೀಯ ಮಹಿಳಾ ದಿನವಾದ ಮಾರ್ಚ್ ೮ ರವರೆಗೆ ನಡೆಯಲಿದೆ. ವಿವಿಧ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಈ ಸಂಬಂಧ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ತಿಳಿಸಿದೆ. ದೇಶದಲ್ಲಿ ಕುಸಿಯುತ್ತಿರುವ ಮಕ್ಕಳ ಲಿಂಗಾನುಪಾತ ಮತ್ತು ಲಿಂಗ ಅಸಮಾನತೆಯ ಸಮಸ್ಯೆಗೆ ಉತ್ತರವಾಗಿ ೨೦೧೫ರ ಜನವರಿ ೨೨ ರಂದು ಹರಿಯಾಣದ ಪಾಣಿಪತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಈ ಯೋಜನೆಗೆ ಚಾಲನೆ ನೀಡಿದ್ದರು.

<><><><>

ಬೇಟಿ ಬಚಾವೋ ಬೇಟಿ ಪಡಾವೋ ಆಂದೋಲನ ಪರಿವರ್ತನಾತ್ಮಕ, ಜನಶಕ್ತಿಯಿಂದ ಕೂಡಿದ ಉಪಕ್ರಮವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಆಂದೋಲನದ ೧೦ ವರ್ಷಗಳನ್ನು ಪೂರೈಸಿದ ಸಂದರ್ಭದಲ್ಲಿ, ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು ಬೇಟಿ ಬಚಾವೋ ಬೇಟಿ ಪಡಾವೋ ಆಂದೋಲನ ಲಿಂಗಾಧರಿತ ಪಕ್ಷಪಾತಗಳನ್ನು ನಿವಾರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಹೆಣ್ಣು ಮಗುವಿಗೆ ಶಿಕ್ಷಣ ಮತ್ತು ಅವರ ಕನಸುಗಳನ್ನು ಸಾಧಿಸಲು ಅವಕಾಶಗಳನ್ನು ಪಡೆಯಲು ಸೂಕ್ತ ವಾತಾವರಣವನ್ನು ಸೃಷ್ಟಿಸಿದೆ ಎಂದು ತಿಳಿಸಿದ್ದಾರೆ.

<><><><>

ನವದೆಹಲಿಯಲ್ಲಿ ನಡೆದ ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೋ -೨೦೨೫ ಕ್ಕೆ ಇಂದು ತೆರೆಬಿದ್ದಿದೆ. ದೇಶಾದ್ಯಂತದ ವಾಹನ ಪ್ರಿಯರು ಭಾರತ್ ಮಂಟಪದಲ್ಲಿ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಹೊಸದಾಗಿ ಬಿಡುಗಡೆಯಾದ ಮತ್ತು ಆಧುನೀಕರಿಸಿದ ವಾಹನಗಳನ್ನು ಅನ್ವೇಷಿಸಿದರು. ಎಲೆಕ್ಟ್ರಾನಿಕ್ಸ್ ಮತ್ತು ವಿಂಟೇಜ್ ಕಾರುಗಳು ವೀಕ್ಷಕರ ಆಕರ್ಷಣೆಯ ಕೇಂದ್ರಬಿಂದುವಾಗಿತ್ತು. ಬೈಕ್‌ಗಳು, ಸ್ಕೂಟಿ ಮತ್ತು ಅನೇಕ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳು ಸಹ ಜನರನ್ನು ಆಕರ್ಷಿಸಿತು. ಶೀಘ್ರದಲ್ಲೇ ಬಿಡುಗಡೆಯಾಗಲಿರುವ ವಾಹನಗಳನ್ನು ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೋದಲ್ಲಿ ಪ್ರದರ್ಶಿಸಲಾಯಿತು.

<><><>

೨೦೨೫-೨೬ರ ಸಾಲಿಗೆ ಕಚ್ಚಾ ಸೆಣಬಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಏರಿಕೆ ಮಾಡಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ನವದೆಹಲಿಯಲ್ಲಿಂದು ಸಂಪುಟ ಸಭೆಯ ತೀರ್ಮಾನಗಳ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಪ್ರತಿ ಕ್ವಾಂಟಾಲ್ ಕಚ್ಚಾ ಸೆಣಬಿಗೆ ಕನಿಷ್ಠ ಬೆಂಬಲ ಬೆಲೆ ೫ ಸಾವಿರದ ೬೫೦ ರೂಪಾಯಿ ನಿಗದಿ ಮಾಡಲಾಗಿದೆ. ಇದು ಕಳೆದ ವರ್ಷಕ್ಕೆ ಹೋಲಿಸಿದರೆ ೩೧೫ ರೂಪಾಯಿಗಳ ಹೆಚ್ಚಳ ಕಂಡಿದೆ. ಕಚ್ಚಾ ಸೆಣಬಿನ ಉತ್ಪಾದನೆಯಲ್ಲಿ ತೊಡಗಿರುವ ಈಶಾನ್ಯ ಪ್ರದೇಶದ ೪೦ ಲಕ್ಷ ರೈತ ಕುಟುಂಬಗಳಿಗೆ ಇದರಿಂದ ನೇರವಾಗಿ ಅಥವಾ ಪರೋಕ್ಷವಾಗಿ ಅನುಕೂಲವಾಗಲಿದೆ ಎಂದರು. ಸಂಪುಟ ಸಭೆಯಲ್ಲಿ ರಾಷ್ಟ್ರೀಯ ಆರೋಗ್ಯ ಯೋಜನೆ ಸಾಧಿಸಿರುವ ಪ್ರಗತಿಯ ಪರಿಶೀಲನೆ ನಡೆಸಲಾಗಿದೆ. ಮೊದಲೇ ನಿರ್ಧರಿಸಿದಂತೆ ಈ ಯೋಜನೆಯನ್ನು ಇನ್ನು ೨ ವರ್ಷಗಳ ಕಾಲ ಮುಂದುವರೆಸಲು ತೀರ್ಮಾನಿಸಲಾಗಿದೆ ಎಂದು ಮಾಹಿತಿ ನೀಡಿದರು.

**ಧ್ವನಿ : ಪಿಯೂಷ್ ಗೋಯಲ್**

<><><>

ಟರ್ಕಿಯ ಬೊಲು ಪ್ರಾಂತ್ಯದಲ್ಲಿರುವ ಸ್ಕಿ ರೆಸಾರ್ಟ್‌ನಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೭೬ಕ್ಕೆ ಏರಿದೆ. ೧೨ ಮಹಡಿ ಹೊಟೆಲ್‌ನಲ್ಲಿ ಇಂದು ಬೆಳಗಿನ ಜಾವ ೩.೩೦ರ ಸುಮಾರಿಗೆ ಸಂಭವಿಸಿದ ಬೆಂಕಿ ಅನಾಹುತದಲ್ಲಿ ೫೧ಕ್ಕೂ ಅಧಿಕ ಜನ ಗಾಯಗೊಂಡಿದ್ದಾರೆ.

<><><>

ಪ್ರಯಾಗ್‌ರಾಜ್‌ನಲ್ಲಿಂದು ಉತ್ತರಪ್ರದೇಶ ಸರ್ಕಾರದ ವಿಶೇಷ ಸಂಪುಟ ಸಭೆಯನ್ನು ನಡೆಸಲಾಯಿತು. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ರಾಜ್ಯ ಸರ್ಕಾರದ ಎಲ್ಲ ಹಿರಿಯ ಸಚಿವರು ಪಾಲ್ಗೊಂಡಿದ್ದರು. ಈ ವೇಳೆ ರಾಜ್ಯದ ಪ್ರಗತಿ ಹಾಗೂ ಸಾರ್ವಜನಿಕ ಕಲ್ಯಾಣಕ್ಕಾಗಿ ಹಲವು ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಯೋಗಿ ಆದಿತ್ಯನಾಥ್, ಸರ್ಕಾರಿ - ಖಾಸಗಿ ಪಾಲುದಾರಿಕೆ - ಪಿಪಿಪಿ ಮಾದರಿಯ ಅಡಿಯಲ್ಲಿ ಹತ್ರಾಸ್, ಬಾಗ್‌ಪತ್ ಮತ್ತು ಕಸ್‌ಗಂಜ್ ನಲ್ಲಿ ವೈದ್ಯಕೀಯ ಕಾಲೇಜುಗಳ ನಿರ್ಮಾಣಕ್ಕೆ ಸರ್ಕಾರ ಅನುಮೋದನೆ ನೀಡಿದೆ ಎಂದರು. ಪ್ರಯಾಗ್‌ರಾಜ್, ವಾರಣಸಿ ಮತ್ತು ಆಗ್ರ ನಗರ ಪಾಲಿಕೆಗಳಿಗೆ ಬಾಂಡ್‌ಗಳನ್ನು ನೀಡುವ ಕುರಿತಂತೆ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ನಗರಗಳಲ್ಲಿ ನಗರ ಮೂಲಸೌಕರ್ಯವನ್ನು ಉನ್ನತೀಕರಿಸಿ, ಸುಸ್ಥಿರ ಬೆಳವಣಿಗೆಯನ್ನು ಖಚಿತಪಡಿಸಿಕೊಳ್ಳಲು ನಿಧಿಯನ್ನು ರಚಿಸಲು ಈ ಬಾಂಡ್‌ಗಳು ಸಹಕಾರಿಯಾಗಲಿವೆ ಎಂದು ಮಾಹಿತಿ ನೀಡಿದರು. ಇದೇ ವೇಳೆ ಪ್ರಯಾಗ್ ರಾಜ್ ಮತ್ತು ನೆರೆಹೊರೆ ಜಿಲ್ಲೆಗಳು ಹಾಗೂ ಇತರ ಪ್ರದೇಶಗಳಲ್ಲಿ ಸಂಪರ್ಕವನ್ನು ಉನ್ನತೀಕರಿಸುವ ಯೋಜನೆಗಳನ್ನು ಮುಖ್ಯಮಂತ್ರಿಗಳು ಘೋಷಿಸಿದರು. ಬಳಿಕ, ಮುಖ್ಯಮಂತ್ರಿಯವರು ಹಾಗೂ ಸಚಿವ ಸಂಪುಟದ ಸದಸ್ಯರು ತ್ರಿವೇಣಿ ಸಂಗಮದಲ್ಲಿ ಪೂಜಾ ವಿಧಾನಗಳನ್ನು ನೆರವೇರಿಸಿ ಪವಿತ್ರ ಸ್ನಾನ ಕೈಗೊಂಡರು.

<><><>

ದೆಹಲಿ ವಿಧಾನಸಭಾ ಚುನಾವಣೆ ಸಂಬಂಧ ಪ್ರಧಾನಮಂತ್ರಿ ನರೇಂದ್ರ ಮೋದಿ, ಪಕ್ಷದ ಪ್ರಚಾರದ ಭಾಗವಾಗಿ ದೆಹಲಿಯಲ್ಲಿಂದು ಭಾರತೀಯ ಜನತಾಪಕ್ಷದ ಬೂತ್ ಮಟ್ಟದ ಕಾರ್ಯಕರ್ತರನ್ನು ಉದ್ದೇಶಿಸಿ ನಮೋ ಅಪ್ಲಿಕೇಷನ್ ಮೂಲಕ ಮಾತನಾಡಿದರು. ಮೇರಾ ಬೂತ್ ಸಬ್ಸೆ ಮಜಬೂತ್ ಕಾರ್ಯಕ್ರಮದಲ್ಲಿ ದೆಹಲಿಯ ಎಲ್ಲಾ ೨೫೦ ವಾರ್ಡ್‌ಗಳ ೧೩ ಸಾವಿರದ ೩೩ ಬೂತ್‌ಗಳ ಬಿಜೆಪಿ ಕಾರ್ಯಕರ್ತರು ವಿಡಿಯೋ ಕರೆಯ ಮೂಲಕ ಪಾಲ್ಗೊಂಡಿದ್ದರು.

<><><>

ಕರ್ನಾಟಕದ ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ಅರಬೈಲ್ ಘಟ್ಟದ ಬಳಿ ತರಕಾರಿ ತುಂಬಿದ್ದ ಲಾರಿ ಇಂದು ಬೆಳಗಿನ ಜಾವ ಪಲ್ಟಿಯಾಗಿ, ೧೦ ಮಂದಿ ಸ್ಥಳದಲ್ಲೇಯೇ ಸಾವನ್ನಪ್ಪಿದ ಘಟನೆ ಕುರಿತು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮದಲ್ಲಿ ಸಂತಾಪ ವ್ಯಕ್ತಪಡಿಸಿದ್ದು,

ಪ್ರಧಾನಮಂತ್ರಿ ಪರಿಹಾರ ನಿಧಿಯಿಂದ ಮೃತಪಟ್ಟವರ ಕುಟುಂಬಕ್ಕೆ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡಿವರಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ರಾಜ್ಯದಲ್ಲಿ ನಡೆದ ಎರಡು ರಸ್ತೆ ಅವಘಡಗಳಲ್ಲಿ ೧೪ ಮಂದಿ ಸಾವನ್ನಪ್ಪಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಮೃತಪಟ್ಟವರ ಕುಟುಂಬಗಳಿಗೆ ರಾಜ್ಯ ಸರ್ಕಾರದ ವತಿಯಿಂದ ತಲಾ ೩ ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು. ಜೊತೆಗೆ ಅಪಘಾತದಲ್ಲಿ ಗಾಯಗೊಂಡವರ ಉಚಿತ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗುವುದು ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><><>

ಶ್ರೀಕೃಷ್ಣ ಜನ್ಮಭೂಮಿ ಮತ್ತು ಶಾಹಿ ಈದ್ಗಾ ಮಸೀದಿಯ ವಿವಾದಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಿಂದ ನೇಮಿಸಲ್ಪಟ್ಟ ಆಯುಕ್ತರು ಮಥುರಾದಲ್ಲಿರುವ ಶಾಹಿ ಈದ್ಗಾ ಮಸೀದಿಯ ತಪಾಸಣೆ ಕುರಿತು ಅಲಹಾಬಾದ್ ಉಚ್ಚನ್ಯಾಯಾಲಯ ನೀಡಿದ್ದ ಆದೇಶಕ್ಕೆ ಮಧ್ಯಾಂತರ ತಡೆಯಾಜ್ಞೆಯನ್ನು ಸುಪ್ರೀಂಕೋರ್ಟ್ ಇಂದು ವಿಸ್ತರಿಸಿದೆ.

ಅಲಹಾಬಾದ್ ಉಚ್ಚನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಮಸೀದಿ ಸಮಿತಿಯು ಸಲ್ಲಿಸಿದ್ದ ಮೇಲ್ಮನವಿಯನ್ನು ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ, ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ.ವಿ. ವಿಶ್ವನಾಥನ್ ಅವರಿದ್ದ ಪೀಠ ಇಂದು ಪರಿಶೀಲನೆ ನಡೆಸಿತು. ೨೦೨೪ರ ಜನವರಿ ೧೬ರಂದು ಸುಪ್ರೀಂಕೋರ್ಟ್ ಹಿಂದೂ ಭಕ್ತರ ಪರಿಶೀಲನೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವ ಅಲಹಾಬಾದ್ ಹೈಕೋರ್ಟ್‌ನ ಆದೇಶವನ್ನು ತಡೆ ಹಿಡಿಯಿತು. ಈಗ ಈ ತಡೆಯಾಜ್ಞೆಯನ್ನು ವಿಸ್ತರಿಸಲಾಗಿದೆ. ಆದರೂ ಅಲಹಾಬಾದ್ ಹೈಕೋರ್ಟ್‌ನಲ್ಲಿ ವಿಚಾರಣೆಗಳು ಮುಂದುವರೆಯಬಹುದಾಗಿದೆ. ಉಭಯ ಪಕ್ಷದವರಿಗೂ ಪ್ರಯೋಜನವಾಗುವ ನಿಟ್ಟಿನಲ್ಲಿ ಅಲಹಾಬಾದ್ ಹೈಕೋರ್ಟ್‌ನಿಂದ ಸಂಬಂಧಿತ ಎಲ್ಲ ಮೊಕದ್ದಮ್ಮೆಗಳನ್ನು ಕ್ರೂಢೀಕರಿಸುವಂತೆ ಸರ್ವೋಚ್ಚ ನ್ಯಾಯಾಲಯ ತಿಳಿಸಿದೆ. ಈ ಹಿಂದೆ ಸರ್ವೋಚ್ಚ ನ್ಯಾಯಾಲಯ ಕಕ್ಷಿದಾರರು, ತಮ್ಮ ವಾದವನ್ನು ಬೆಂಬಲಿಸುವ ಸಂಕ್ಷಿಪ್ತ ಲಿಖಿತ ಉತ್ತರಗಳನ್ನು ಸಲ್ಲಿಸುವಂತೆ ನಿರ್ದೇಶಿಸಿತ್ತು.

<><><>

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಐದು ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿಂದು ಭಾರತ ಹಾಗೂ ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದಿರುವ

ಭಾರತ ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ. ಬ್ಯಾಟಿಂಗ್ ಮಾಡುತ್ತಿರುವ ಇಂಗ್ಲೆಂಡ್ ತಂಡ ಇತ್ತೀಚಿನ ವರದಿ ಬಂದಾಗ ೫.೫ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೪೪ ರನ್ ಮಾಡಿ ಆಡುತ್ತಿದೆ. ಕೋಲ್ಕತ್ತಾದಲ್ಲಿ ಪ್ರಾರಂಭವಾಗಿರುವ ಸರಣಿಯ ಪಂದ್ಯಗಳು ನಂತರ ಚೆನ್ನೈ, ರಾಜ್‌ಕೋಟ್, ಪುಣೆ ನಡೆಯಲಿದ್ದು, ಕೊನೆಯ ಟಿ-೨೦ ಪಂದ್ಯ ಫೆಬ್ರವರಿ ೨ ರಂದು ಮುಂಬೈನಲ್ಲಿ ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>